## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: 2021-22ನೇ ಸಾಲಿನಲ್ಲಿ ಕೈಮಗ್ಗ ನೇಕಾರರಿಗೆ **"ನೇಕಾರರ ಸಮ್ಮಾನ್ ಯೋಜನೆ"** ಯಡಿ ಆರ್ಥಿಕ ನೆರವು ರೂ.2000/-ಗಳನ್ನು ವಾರ್ಷಿಕವಾಗಿ ನೇರ ನಗದು ವರ್ಗಾವಣೆ ಮುಖಾಂತರ ನೀಡುವ ಯೋಜನೆಯನ್ನು ಮುಂದುವರೆಸುವ ಕುರಿತು.

ಓದಲಾಗಿದೆ:
1. ಸರ್ಕಾರಿ ಆದೇಶ ಸಂಖ್ಯೆ: ವಾಕೈ 47 JAKY 2020, ದಿನಾಂಕ: 16.05.2020.
2. 2021-22ನೇ ಸಾಲಿನ ಆಯವ್ಯಯ ಘೋಷಣೆ ಕಂಡಿಕೆ-217.
3. ಜವಳಿ ಅಭಿವೃದ್ಧಿ ಆಯುಕ್ತರು ಹಾಗೂ ನಿರ್ದೇಶಕರು, ಕೈಮಗ್ಗ ಮತ್ತು ಜವಳಿ ಇಲಾಖೆ, ಬೆಂಗಳೂರು ಇವರ ಪತ್ರ ಸಂಖ್ಯೆ: ಕೈಜಇ/ ಕೈಮಗ್ಗ/ ಹೆಚ್-1/ ನೇ.ಸ.ಯೋ/ 2021-22, ದಿನಾಂಕ: 15.05.2021.

***********

**ಪ್ರಸ್ತಾವನೆ:**

ಮೇಲೆ (1)ರಲ್ಲಿ ಓದಲಾದ ಸರ್ಕಾರದ ಆದೇಶದಲ್ಲಿ, ರಾಜ್ಯದಲ್ಲಿನ ಕೈಮಗ್ಗ ನೇಕಾರಿಕೆ ಹಾಗೂ ಇತರೆ ಕೈಮಗ್ಗ ಚಟುವಟಿಕೆಗಳನ್ನು ನಡೆಸುವ ನೇಕಾರರಿಗೆ "ನೇಕಾರರ ಸಮ್ಮಾನ್ ಯೋಜನೆ" ಯನ್ನು ರೂ.2,000/-ಗಳ ವಾರ್ಷಿಕವಾಗಿ ಆರ್ಥಿಕ ನೆರವನ್ನು ನೇರ ನಗದು ವರ್ಗಾವಣೆ ಮುಖಾಂತರ ನೀಡಲು ಆದೇಶಿಸಲಾಗಿರುತ್ತದೆ.

ಮೇಲೆ (2)ರಲ್ಲಿ ಓದಲಾದ 2021-22ನೇ ಸಾಲಿನ ಆಯವ್ಯಯ ಕಂಡಿಕೆ-217ರಲ್ಲಿ "ಸಂಕಷ್ಟದಲ್ಲಿರುವ ಕೈಮಗ್ಗ ನೇಕಾರರಿಗೆ ನೆರವು ನೀಡುವ ಉದ್ದೇಶದಿಂದ ಜಾರಿಗೆ ತರಲಾಗಿರುವ ನೇಕಾರರ ಸಮ್ಮಾನ್ ಯೋಜನೆಯನ್ನು ಪ್ರಸ್ತುತ ಸಾಲಿಗೂ ಮುಂದುವರೆಸಿ ಕೈಮಗ್ಗ ನೇಕಾರರಿಗೆ 2000 ರೂ. ಗಳ ಆರ್ಥಿಕ ನೆರವನ್ನು ಡಿ.ಬಿ.ಟಿ. ಮೂಲಕ ನೇರವಾಗಿ ವರ್ಗಾವಣೆ ಮಾಡಲಾಗುವುದು" ಎಂದು ಘೋಷಿಸಲಾಗಿರುತ್ತದೆ.

ಮೇಲೆ (3)ರಲ್ಲಿ ಓದಲಾದ ಜವಳಿ ಅಭಿವೃದ್ಧಿ ಆಯುಕ್ತರ ಪತ್ರದಲ್ಲಿ, 2020-21ನೇ ಸಾಲಿನಲ್ಲಿ "ನೇಕಾರ ಸಮ್ಮಾನ್ ಯೋಜನೆ"ಯಡಿ ಈಗಾಗಲೇ ನೋಂದಾಯಿಸಿರುವ ಕೈಮಗ್ಗ ನೇಕಾರರಿಗೆ ಹಾಗೂ ಕೈಮಗ್ಗ ಚಟುವಟಿಕೆಗಳಲ್ಲಿ ತೊಡಗಿರುವ ನೇಕಾರರೂ ಸೇರಿದಂತೆ ಒಟ್ಟು 54,789 ಕೈಮಗ್ಗ ನೇಕಾರರಿಗೆ ತಲಾ ರೂ.2,000/-ಗಳ ಆರ್ಥಿಕ ನೆರವನ್ನು ನೇರ ನಗದು ವರ್ಗಾವಣೆ (ಡಿ.ಬಿ.ಟಿ) ಮುಖಾಂತರ ವರ್ಗಾಯಿಸಲು ಒಟ್ಟು ರೂ.1095.78 ಲಕ್ಷಗಳ ಅನುದಾನವನ್ನು 2021-22ನೇ ಸಾಲಿನ ನೇಕಾರರ ಪ್ಯಾಕೇಜ್ ಯೋಜನೆಯ ಲೆಕ್ಕ ಶೀರ್ಷಿಕೆ:2851-00-103-0-62-106 ರಡಿ ಅನುದಾನವನ್ನು ಬಿಡುಗಡೆ ಮಾಡಲು ಹಾಗೂ ಸದರಿ ಯೋಜನೆಯನ್ನು ಅನುಷ್ಠಾನಗೊಳಿಸಲು ಸರ್ಕಾರದ ಆದೇಶವನ್ನು ಹೊರಡಿಸಲು ಕೋರಿರುತ್ತಾರೆ.

ಜವಳಿ ಅಭಿವೃದ್ಧಿ ಆಯುಕ್ತರು ಹಾಗೂ ನಿರ್ದೇಶಕರು, ಕೈಮಗ್ಗ ಮತ್ತು ಜವಳಿ ಇಲಾಖೆ ಇವರ ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿದ ಸರ್ಕಾರವು ಈ ಕೆಳಗಿನಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: CI 37 JAKY 2021, ಬೆಂಗಳೂರು ದಿನಾಂಕ:24.05.2021**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ರಾಜ್ಯದಲ್ಲಿನ ಕೈಮಗ್ಗ ನೇಕಾರಿಕೆ ಹಾಗೂ ಇತರೆ ಕೈಮಗ್ಗ ಚಟುವಟಿಕೆಗಳನ್ನು ನಡೆಸುವ ನೇಕಾರರಿಗೆ **"ನೇಕಾರರ ಸಮ್ಮಾನ್ ಯೋಜನೆ"** ಯಡಿ ಆರ್ಥಿಕ ನೆರವು ರೂ.2000/-ಗಳನ್ನು ವಾರ್ಷಿಕವಾಗಿ ನೇರ ನಗದು ವರ್ಗಾವಣೆ ಮುಖಾಂತರ ನೀಡುವ ಯೋಜನೆಯನ್ನು 2021-22ನೇ ಸಾಲಿಗೆ ಮುಂದುವರೆಸಿ ಆದೇಶಿಸಿದೆ.

ಸದರಿ ಯೋಜನೆಗೆ ತಗಲುವ ವೆಚ್ಚವನ್ನು 2021-22ನೇ ಸಾಲಿನ ನೇಕಾರರ ಪ್ಯಾಕೇಜ್ ಯೋಜನೆಯ ಲೆಕ್ಕ ಶೀರ್ಷಿಕೆ:2851-00-103-0-62-106 ರಡಿಯಲ್ಲಿ ಒದಗಿಸಲಾದ ಅನುದಾನದಿಂದ ಭರಿಸತಕ್ಕದ್ದು. ಉಳಿದಂತೆ ಸರ್ಕಾರದ ಆದೇಶ ಸಂಖ್ಯೆ: ವಾಕೈ 47 JAKY 2020, ದಿನಾಂಕ:16.05.2020ರಲ್ಲಿನ ಷರತ್ತು ಹಾಗೂ ನಿಬಂಧನೆಗಳು ಯಥಾವತ್ತಾಗಿ ಮುಂದುವರೆಯುತ್ತವೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

24/5/21.
(ಬಿ. ವೆಂಕಟೇಶಮೂರ್ತಿ)
ಸರ್ಕಾರದ ಉಪ ಕಾರ್ಯದರ್ಶಿ
ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆ(ಜವಳಿ)

ಗೆ,

1. ಮಹಾಲೇಖಪಾಲರು (ಲೆಕ್ಕಪತ್ರ; ಲೆಕ್ಕಪರಿಶೋಧನೆ) ಕರ್ನಾಟಕ, ಬೆಂಗಳೂರು.
2. ಜವಳಿ ಅಭಿವೃದ್ಧಿ ಆಯುಕ್ತರು ಹಾಗೂ ನಿರ್ದೇಶಕರು, ಕೈಮಗ್ಗ ಮತ್ತು ಜವಳಿ ಇಲಾಖೆ, ಶುಭೋದಯ ಕಾಂಪ್ಲೆಕ್ಸ್, ನಂ.86, ರೈಲ್ವೆ ಸಮಾನಾಂತರ ರಸ್ತೆ, ಕುಮಾರಪಾರ್ಕ್ ಪಶ್ಚಿಮ, ಬೆಂಗಳೂರು-560 020.
3. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಕೈಮಗ್ಗ ಅಭಿವೃದ್ಧಿ ನಿಗಮ ನಿಯಮಿತ, ಪ್ರಿಯದರ್ಶಿನಿ, ನೇಕಾರ ಭವನ, ವಿದ್ಯಾನಗರ, ಹುಬ್ಬಳ್ಳಿ-580 031.
4. ವ್ಯವಸ್ಥಾಪಕ ನಿರ್ದೇಶಕರು, ಕಾವೇರಿ ಹ್ಯಾಂಡ್ ಲೂಮ್ಸ್, ನಂ.49, ನೇಕಾರರ ಭವನ, ಮಾಡೆಲ್ ಹೌಸ್ ಸ್ಟ್ರೀಟ್, ಬಸವನಗುಡಿ, ಬೆಂಗಳೂರು-560 004.
5. ಸರ್ಕಾರದ ಕಾರ್ಯದರ್ಶಿ(ಎಂ.ಎಸ್.ಎಂ.ಇ. & ಗಣಿ), ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆ- ರವರ ಆಪ್ತ ಕಾರ್ಯದರ್ಶಿ, ವಿಕಾಸ ಸೌಧ, ಬೆಂಗಳೂರು.
6. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಯೋಜನೆ, ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
7. ಮಾನ್ಯ ಜವಳಿ ಹಾಗೂ ಕೈಮಗ್ಗ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಕಾಸ ಸೌಧ, ಬೆಂಗಳೂರು.
8. ಆಂತರಿಕ ಆರ್ಥಿಕ ಸಲಹೆಗಾರರು ಹಾಗೂ ಪದನಿಮಿತ್ತ ಸರ್ಕಾರದ ಉಪ ಕಾರ್ಯದರ್ಶಿ, ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆ ಇವರ ಆಪ್ತ ಸಹಾಯಕರು, ವಿಕಾಸ ಸೌಧ, ಬೆಂಗಳೂರು.
9. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ (ವೆಚ್ಚ-1), ವಿಧಾನ ಸೌಧ, ಬೆಂಗಳೂರು.
10. ಶಾಖಾ ರಕ್ಷಾ ಕಡತ/ ಹೆಚ್ಚುವರಿ ಪ್ರತಿಗಳು.